ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 4/6/2010

# ಬೆಳಗಾವಿಗೆ ಕಚೇರಿ ಶಿಫ್ಟ್: ತಿಂಗಳ ಗಡುವು

**ಬೆಂಗಳೂರು:** ಬೆಂಗಳೂರು ವಿಭಾಗದಲ್ಲಿರುವ ಆಯ್ದ ರಾಜ್ಯ ಮಟ್ಟದ ಸರ್ಕಾರಿ ಕಚೇರಿಗಳನ್ನು ತಿಂಗಳಲ್ಲಿ ಗುರುತಿಸಿ ಬೆಳಗಾವಿಯ ಸುವರ್ಣ ಸೌಧಕ್ಕೆ ಸ್ಥಳಾಂತರಿಸಬೇಕು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗೃಹ ಕಚೇರಿ 'ಕೃಷ್ಣಾ'ದಲ್ಲಿ ಬುಧವಾರ ಲೋಕೋಪಯೋಗಿ ಇಲಾಖೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು ರಾಜ್ಯ ಮಟ್ಟದ ಹಲವು ಕಚೇರಿಗಳನ್ನು ಬೆಳಗಾವಿಗೆ ಸ್ಥಳಾಂತರಿಸುವ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿ ಕಾರ್ಯಗತಗೊಳಿಸಬೇಕು. ಮುಂದಿನ ಸಭೆಯೊಳಗೆ ಹಲವು ಕಚೇರಿಗಳು ಬೆಳಗಾವಿಯ ಸುವರ್ಣ ಸೌಧದಲ್ಲಿ ಕಾರ್ಯ ನಿರ್ವಹಿಸುತ್ತಿರುವುದನ್ನು ಖುದ್ದಾಗಿ ಪರಿಶೀಲಿಸುತ್ತೇನೆ ಎಂದು ಸಿಎಂ ಎಚ್ಚರಿಕೆ ನೀಡಿದರು.

ಈ ಮಧ್ಯೆ ಹೊಸ ಎಂಜಿನಿಯರ್‌ಗಳ ನೇಮಕ ಪ್ರಕ್ರಿಯೆ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ನಿರುದ್ಯೋಗಿ ಎಂಜಿನಿಯರ್‌ಗಳನ್ನೇ ಟೈನಿಗಳೆಂದು ನೇಮಕ ಮಾಡಲು ಕ್ರಮ ವಹಿಸಬೇಕು ಎಂದು ಯಡಿಯೂರಪ್ಪ ಸೂಚನೆ ನೀಡಿದರು.